ಕರ್ನಾಟಕ ಸರ್ಕಾರದ ನಡವಳಿಗಳು

ದಿನಾಂಕ : 22/2/13
ನಂ. 360

ವಿಷಯ: ಕಿಯೋನಿಕ್ಸ್ ಸಂಸ್ಥೆಯಿಂದ ಸರಬರಾಜು ಮಾಡುವ ಎಲೆಕ್ಟ್ರಾನಿಕ್ ಪವರ್ ಪ್ಯೂರಿಫೈಯರ್ ಸೋಲಾರ್ ಸ್ಟ್ರೀಟ್ ಲೈಟ್ಸ್ ಇತರೇ ಸಾಮಗ್ರಿಗಳನ್ನು ಅಳವಡಿಸುವ ಬಗ್ಗೆ.

ಸದಸ್ಯ ಕಾರ್ಯದರ್ಶಿ 22/2
22/2/13
ADP

ಓದಲಾಗಿದೆ:-

1) ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಇವರ ಪತ್ರದ ಸಂಖ್ಯೆ.ಬಿಎಂಆರ್‌ಡಿಎ/Keonics/38/2012-13, ದಿನಾಂಕ. 20-12-2012.
2) ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿ, ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ ಇವರ ಪತ್ರದ ಸಂಖ್ಯೆ.ಬಿಐಎಎಪಿಎ/ /ಟಿಪಿ/ಅ.ಆ/03/2012-13/2284, ದಿನಾಂಕ.06-11-2012.
3) ಸರ್ಕಾರದ ಆದೇಶ ಸಂಖ್ಯೆ: ನಅಇ 200 ಬಿಎಂಆರ್ 2009, ದಿನಾಂಕ: 19.09.2011

22/2/13

ಪ್ರಸ್ತಾವನೆ:

ಮೇಲೆ (1) ರಲ್ಲಿ ಓದಲಾದ ದಿನಾಂಕ.20-12-2012ರ ಪತ್ರದಲ್ಲಿ ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಬೆಂಗಳೂರು, ಇವರು ಸದಸ್ಯ ಕಾರ್ಯದರ್ಶಿಗಳು, ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ ಇವರು ಕಿಯೋನಿಕ್ಸ್ ಸಂಸ್ಥೆಯಿಂದ ಸರಬರಾಜು ಮಾಡುವ ಎಲೆಕ್ಟ್ರಾನಿಕ್ ಪವರ್ ಪ್ಯೂರಿಫೈಯರ್ ಸೋಲಾರ್ ಸ್ಟ್ರೀಟ್ ಲೈಟ್ಸ್ ಇತರೆ ಸಾಮಗ್ರಿಗಳನ್ನು ಅಳವಡಿಸುವ ಬಗ್ಗೆ ಪ್ರಸ್ತಾವನೆಯನ್ನು ಸಲ್ಲಿಸಿದ್ದು, ಸದರಿ ವಿಷಯವನ್ನು ದಿನಾಂಕ: 04.10.2012ರಂದು ನಡೆದ ಪ್ರಾಧಿಕಾರದ ಸಭೆಯಲ್ಲಿ ಮಂಡಿಸಿ, ವಿದ್ಯುತ್ ಸಮಸ್ಯೆಯು ಗಂಭೀರ ಸಮಸ್ಯೆಯಾಗಿದ್ದು, ಪ್ರಾಧಿಕಾರದ ವ್ಯಾಪ್ತಿಯಲ್ಲಿನ ಸಾರ್ವಜನಿಕ ಸ್ಥಳಗಳಲ್ಲಿನ ಸೋಲಾರ್ ಸ್ಟ್ರೀಟ್‌ಲೈಟ್‌ಗಳನ್ನು ಅಳವಡಿಸಲು ಕ್ರಮ ಕೈಗೊಂಡಲ್ಲಿ ಸಾರ್ವಜನಿಕರಿಗೆ ಅನುಕೂಲವಾಗುವುದರ ಜೊತೆಗೆ ಸ್ಥಳೀಯ ಸಂಸ್ಥೆಗಳ ಆರ್ಥಿಕ ಹೊರೆಯು ಕಡಿಮೆಯಾಗುವುದರಿಂದ ಸದರಿ ಸಭೆಯಲ್ಲಿ ಸರ್ಕಾರದ ವಿವಿಧ ಆದೇಶಗಳಲ್ಲಿ 62,97,82,500.00 ರೂ.ಗಳ ಅನುದಾನವನ್ನು ಅಭಿವೃದ್ಧಿ ಕಾರ್ಯಗಳಿಗೆ ನೀಡಲು ಆದೇಶಗಳಿದ್ದು, ಶೇ 75% ರ ಮೊತ್ತದಲ್ಲಿ 14,73,56,231.00 ರೂ.ಗಳನ್ನು ಉದ್ಯಾನವನ ಮತ್ತು ಬಯಲುಜಾಗ ಪ್ರದೇಶಗಳನ್ನು ಅಭಿವೃದ್ಧಿ ಪಡಿಸಲು ಮೀಸಲಿರಿಸಲಾಗಿರುತ್ತದೆ ಎಂದು ತಿಳಿಸಿ, ರಸ್ತೆ ಮತ್ತು ಇತರೆ ಅಭಿವೃದ್ಧಿ ಕಾರ್ಯಗಳಿಗೆ ರೂ.3,05,00,000.00 ರೂ.ಗಳು ಮತ್ತು ಕುಡಿಯುವ ನೀರಿನ ಕಾಮಗಾರಿಗಳಿಗೆ ರೂ. 3,00,00,000.00 ಒಟ್ಟು 6,05,00,000.00 ರೂ.ಗಳಿಗೆ ಈಗಾಗಲೇ ಪ್ರಸ್ತಾವನೆಗಳನ್ನು ಸರ್ಕಾರಕ್ಕೆ ಕಳುಹಿಸಲಾಗಿರುವುದಾಗಿಯೂ ಮತ್ತು ಪ್ರಾಧಿಕಾರದ ಸ್ವಂತ ಕಟ್ಟಡ ನಿರ್ಮಾಣಕ್ಕೆ 2,00,00,000.00 ರೂ.ಗಳನ್ನು ಮೀಸಲಿರಿಸಲಾಗಿದೆಯೆಂದು ತಿಳಿಸಿ, ಉಳಿಕೆ ಲಭ್ಯವಿರುವ 3,55,29,850.00 ರೂ.ಗಳಲ್ಲಿ ದೇವನಹಳ್ಳಿ ತಾಲ್ಲೂಕಿನ ಕಸಬಾ, ಹಂದಾಣ,

ಚನ್ನರಾಯಪಟ್ಟಣ ಮತ್ತು ವಿಜಯಪುರ ಹೋಬಳಿಗಳು, ದೊಡ್ಡಬಳ್ಳಾಪುರ ತಾಲ್ಲೂಕಿನ ಕಸಬಾ ಹೋಬಳಿ ಮತ್ತು ಬೆಂಗಳೂರು ಉತ್ತರ (ಅಪರ) ತಾಲ್ಲೂಕಿನ ಜಾಲ ಮತ್ತು ಹೆಸರುಘಟ್ಟ ಹೋಬಳಿಗಳಿಗೆ ತಲಾ 40,00,000 ಲಕ್ಷ ರೂ.ಗಳಂತೆ ಒಟ್ಟು 2,80,00,000 ರೂಗಳು ದೇವನಹಳ್ಳಿ ಮತ್ತು ವಿಜಯಪುರ ಪುರಸಭೆಗಳಿಗೆ ತಲಾ 20 ಲಕ್ಷ ರೂ.ಗಳಂತೆ ಒಟ್ಟು 40,00,000 ರೂಗಳು ಹಾಗೂ ದೊಡ್ಡಬಳ್ಳಾಪುರ ನಗರ ಸಭೆಗೆ 30 ಲಕ್ಷ ರೂಗಳಂತೆ ಒಟ್ಟು 3,50,00,000 ರೂಗಳನ್ನು ಮೀಸಲಿರಿಸಬಹುದಾಗಿರುತ್ತದೆ ಎಂದು ಸದರಿ ಮೊತ್ತವನ್ನು ಮೀಸಲಿಡುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ, ಸರ್ಕಾರದಿಂದ ಸೂಕ್ತ ಆದೇಶವಾದ ನಂತರ ಕ್ರಿಯಾ ಯೋಜನೆಯನ್ನು ತಯಾರಿಸಿ ಸರ್ಕಾರಕ್ಕೆ ಸಲ್ಲಿಸಲು ತೀರ್ಮಾನಿಸಲಾಗಿದೆ ಎಂದು ತಿಳಿಸಿ, ಅದರಂತೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಕಳುಹಿಸಲು ಕೋರಿರುವುದಾಗಿ ವರದಿ ಮಾಡಿರುತ್ತಾರೆ. ಮುಂದುವರೆದು ಸರ್ಕಾರದ ಆದೇಶ ಸಂಖ್ಯೆ: ನಅಇ 200 ಬಿಎಂಆರ್ 2009, ದಿನಾಂಕ: 19.09.2011ರ ಕಂಡಿಕೆ-2ರ ಪ್ರಮುಖ ರಸ್ತೆ ನಿರ್ಮಾಣ ಮತ್ತು ನವೀಕರಣ ಹಾಗೂ ರಾಷ್ಟ್ರೀಯ ಹೆದ್ದಾರಿಗಳಿಂದ ರಾಜ್ಯ ಹೆದ್ದಾರಿಗಳ ಸಂಪರ್ಕ ರಸ್ತೆಯ ನಿರ್ಮಾಣ ಎಂದಿರುತ್ತದೆ ಎಂದು ಆದರೆ ಸೋಲಾರ್ ಸ್ಟ್ರೀಟ್ ಲೈಟ್‌ಗಳನ್ನು ಅಳವಡಿಸುವ ಬಗ್ಗೆ ಸ್ಪಷ್ಟನೆ ಇರುವುದಿಲ್ಲವೆಂದು ತಿಳಿಸಿ, ದಿನಾಂಕ: 19.09.2011ರ ಆದೇಶವನ್ನು ಮಾರ್ಪಡಿಸಿ, ರಸ್ತೆಗಳಿಗೆ ಸೋಲಾರ್ ಸ್ಟ್ರೀಟ್ ಲೈಟ್‌ಗಳನ್ನು ಅಳವಡಿಸುವುದನ್ನು ಸಹ ಸೇರಿಸಿ ಆದೇಶ ಹೊರಡಿಸಬೇಕಾಗಿರುತ್ತದೆ ಎಂದು ತಿಳಿಸಿ, ಸದಸ್ಯ ಕಾರ್ಯದರ್ಶಿಗಳ ಪ್ರಸ್ತಾವನೆ ಹಾಗೂ ಬೆಂಗಳೂರು ಅಂತರಾಷ್ಟ್ರೀಯ ವಿಮಾಣ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದ ನಡವಳಿಯಂತೆ ಪ್ರಸ್ತಾವನೆಯನ್ನು ಸರ್ಕಾರದ ಮುಂದಿನ ಕ್ರಮಕ್ಕಾಗಿ ಸಲ್ಲಿಸಿರುತ್ತಾರೆ.

ಮೇಲೆ (2)ರಲ್ಲಿ ಓದಲಾದ ದಿನಾಂಕ: 06-11-2012ರ ಪತ್ರದಲ್ಲಿ ಸದಸ್ಯ ಕಾರ್ಯದರ್ಶಿಗಳು, ಬೆಂಗಳೂರು ಅಂತರಾಷ್ಟ್ರೀಯ ವಿಮಾಣ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ ಇವರು ದಿನಾಂಕ: 04.10.2012ರಂದು ಬೆಂಗಳೂರು ಅಂತರಾಷ್ಟ್ರೀಯ ವಿಮಾಣ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದ 89ನೇ ಸಭೆಯ ವಿಷಯ ಸಂಖ್ಯೆ: 89(12)ರಲ್ಲಿ ಪ್ರಸ್ತುತ ವಿದ್ಯುತ್ ಸಮಸ್ಯೆಯು ಗಂಭೀರ ಸಮಸ್ಯೆಯಾಗಿದ್ದು, ಪ್ರಾಧಿಕಾರದ ವ್ಯಾಪ್ತಿಯಲ್ಲಿನ ಸಾರ್ವಜನಿಕ ಸ್ಥಳಗಳಲ್ಲಿ ಸೋಲಾರ್ ಸ್ಟ್ರೀಟ್ ಲೈಟ್‌ಗಳನ್ನು ಅಳವಡಿಸಲು ಕ್ರಮ ಕೈಗೊಂಡಲ್ಲಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಿದಂತಾಗುವುದಲ್ಲದೇ, ಸ್ಥಳೀಯ ಸಂಸ್ಥೆಗಳ ಆರ್ಥಿಕ ಹೊರೆಯನ್ನು ಸಹ ತಗ್ಗಿಸಿದಂತಾಗುತ್ತದೆ ಎಂದು ಅಭಿಪ್ರಾಯಪಟ್ಟಿರುವುದಾಗಿ ಈಗಾಗಲೇ ಸರ್ಕಾರದ ವಿವಿಧ ಆದೇಶಗಳಲ್ಲಿ 62,97,82,500-00 ರೂ.ಗಳ ಅನುದಾನವನ್ನು ಅಭಿವೃದ್ಧಿ ಕಾರ್ಯಗಳಿಗೆ ನೀಡಲು ಆದೇಶಗಳಿದ್ದು, ರಸ್ತೆಯನ್ನು ಇತರೆ ಅಭಿವೃದ್ಧಿ ಕಾರ್ಯಗಳಿಗೆ ರೂ.3,05,00,000-00 ಮತ್ತು ಕುಡಿಯುವ ನೀರಿನ ಕಾಮಗಾರಿಗಳಿಗೆ ರೂ.3,00,00,000-00 ಒಟ್ಟು 6,05,00,000-00 ರೂ.ಗಳಿಗೆ ಈಗಾಗಲೇ ಪ್ರಸ್ತಾವನೆಗಳನ್ನು ಸರ್ಕಾರಕ್ಕೆ ಕಳುಹಿಸಲಾಗಿರುತ್ತದೆಯೆಂದು, ಈ ಎಲ್ಲಾ ಬಾಬ್ತುಗಳಿಗೆ ಹಣ ನಿಗಧಿಪಡಿಸಿದ ನಂತರ ಪ್ರಾಧಿಕಾರದಲ್ಲಿ 3,55,29,820-00 ರೂ.ಗಳು ಬಾಕಿ ಉಳಿದಿರುತ್ತದೆ.

ಮುಂದುವರೆದಂತೆ, ಪ್ರಾಧಿಕಾರದ ವ್ಯಾಪ್ತಿಯಲ್ಲಿ 7 ಹೋಬಳಿಗಳು ಮತ್ತು 2 ಪುರಸಭೆ ಹಾಗೂ 1 ನಗರಸಭೆಗಳು ಇದ್ದು, ಪ್ರಾಧಿಕಾರದಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಲಭ್ಯವಿರುವ 3,55,29,850-00 ರೂ.ಗಳಲ್ಲಿ ದೇವನಹಳ್ಳಿ ತಾಲ್ಲೂಕಿನ ಕಸಬಾ, ಕುಂದಾಣ, ಚನ್ನರಾಯಪಟ್ಟಣ ಮತ್ತು ವಿಜಯಪುರ ಹೋಬಳಿಗಳು, ದೊಡ್ಡಬಳ್ಳಾಪುರ ತಾಲ್ಲೂಕಿನ ಕಸಬಾ ಹೋಬಳಿ ಮತ್ತು ಬೆಂಗಳೂರು ಉತ್ತರ (ಅಪರ) ತಾಲ್ಲೂಕಿನ ಜಾಲ ಮತ್ತು ಹೆಸರುಘಟ್ಟ

ಹೋಬಳಿಗಳಿಗೆ ತಲಾ 40 ಲಕ್ಷ ರೂ.ಗಳಂತೆ ಒಟ್ಟು 2,80,00,000–00 ರೂ.ಗಳು ದೇವನಹಳ್ಳಿ ಮತ್ತು ವಿಜಯಪುರ ಪುರಸಭೆಗಳಿಗೆ ತಲಾ 20 ಲಕ್ಷ ರೂ.ಗಳಂತೆ ಒಟ್ಟು 40,00,000–00 ರೂ.ಗಳು ಹಾಗೂ ದೊಡ್ಡಬಳ್ಳಾಪುರ ನಗರ ಸಭೆಗೆ 30 ಲಕ್ಷ ರೂ.ಗಳಂತೆ ಒಟ್ಟು 3,50,00,000–00 ರೂ.ಗಳನ್ನು ಮೀಸಲಿರಿಸಬಹುದಾಗಿರುತ್ತದೆ ಎಂದು ಸಭೆಯಲ್ಲಿ ನಿರ್ಣಯಿಸಿ ಸದರಿ ಹಣವನ್ನು ಮೀಸಲಿರಿಸುವ ಬಗ್ಗೆ ಸೂಕ್ತ ಆದೇಶ ಹೊರಡಿಸುವಂತೆ ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಇವರನ್ನು ಕೋರಿ ಹಾಗೂ ಸರ್ಕಾರದಿಂದ ಸೂಕ್ತ ಆದೇಶವಾದ ನಂತರ ಸ್ಥಳೀಯ ಸಂಸ್ಥೆಗಳು ಕ್ರಿಯಾ ಯೋಜನೆಯನ್ನು ತಯಾರಿಸಿ ಸಲ್ಲಿಸಿದ್ದಲ್ಲಿ ಕ್ರಿಯಾ ಯೋಜನೆಯನ್ನು ಅನುಮೋದನೆಗಾಗಿ ಸರ್ಕಾರಕ್ಕೆ ಸಲ್ಲಿಸಲು ಸಹ ಸಭೆಯಲ್ಲಿ ತೀರ್ಮಾನಿಸಲಾಗಿರುತ್ತದೆ ಎಂದು ಸದಸ್ಯ ಕಾರ್ಯದರ್ಶಿಗಳು ತಿಳಿಸಿರುತ್ತಾರೆ.

ಮೇಲೆ (3)ರಲ್ಲಿ ಓದಲಾದ ದಿನಾಂಕ: 19.09.2011ರ ಆದೇಶದಲ್ಲಿ ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಬರುವ ಸ್ಥಳೀಯ ಯೋಜನಾ ಪ್ರಾಧಿಕಾರ ಗಳಾದ ಆನೇಕಲ್, ಹೊಸಕೋಟೆ, ನೆಲಮಂಗಲ, ಕನಕಪುರ, ಮಾಗಡಿ ಮತ್ತು ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದಲ್ಲಿ ಲಭ್ಯವಿರುವ ಹಣದಲ್ಲಿ ಶೇ.25 ರಷ್ಟು ಹಣವನ್ನು ಆಡಳಿತಾತ್ಮಕ ವೆಚ್ಚಗಳಿಗೆ ಮೀಸಲಿರಿಸಿಕೊಂಡು, ಉಳಿದ ಹಣದಲ್ಲಿ ರೂ.25 ಲಕ್ಷಗಳ ಪ್ರತಿ ಅಂದಾಜು ವೆಚ್ಚಗಳಿಗೆ ಕಡಿಮೆ ಇಲ್ಲದಂತೆ, ಈ ಕೆಳಕಂಡ ಅಭಿವೃದ್ಧಿ ಕಾರ್ಯಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ ಹಾಗೂ ಲೋಕೋಪಯೋಗಿ ಇಲಾಖೆಯ ವತಿಯಿಂದ ಕೈಗೊಳ್ಳಲು ಸರ್ಕಾರದ ಮಂಜೂರಾತಿ ನೀಡಿದೆ:-

(1) ಆಯಾಯ ಸ್ಥಳೀಯ ಯೋಜನಾ ಪ್ರಾಧಿಕಾರದಲ್ಲಿ ನೀರು ಮತ್ತು ಒಳಚರಂಡಿ ವ್ಯವಸ್ಥೆ ಕಲ್ಪಿಸಲು ಹಾಗೂ overhead ಟ್ಯಾಂಕ್‌ಗಳ ನಿರ್ಮಾಣ;
(2) ಪ್ರಮುಖ ರಸ್ತೆಗಳ ನಿರ್ಮಾಣ ಮತ್ತು ನವೀಕರಣ ಹಾಗೂ ರಾಷ್ಟ್ರೀಯ ಹೆದ್ದಾರಿಗಳಿಂದ ರಾಜ್ಯ ಹೆದ್ದಾರಿಗಳಿಗೆ ಸಂಪರ್ಕ ರಸ್ತೆ ನಿರ್ಮಾಣ ;
(3) ಸರ್ಕಾರಿ ಶಾಲಾ ಕಾಲೇಜು ಮತ್ತು ಪ್ರಾಥಮಿಕ/ಪ್ರೌಢಶಿಕ್ಷಣ ಕಟ್ಟಡಗಳ ನಿರ್ಮಾಣಕ್ಕಾಗಿ ;
(4) ಅಂಬೇಡ್ಕರ್ ಭವನ ನಿರ್ಮಾಣ ಮತ್ತು ಅಂಗನವಾಡಿ ಕಟ್ಟಡಗಳ ನಿರ್ಮಾಣ ;
(5) ಆಯಾಯ ಸ್ಥಳೀಯ ಯೋಜನಾ ಪ್ರಾಧಿಕಾರದ ತಾಲ್ಲೂಕು ಕೇಂದ್ರಗಳಲ್ಲಿ ಮಳೆ ನೀರು ಸರಾಗವಾಗಿ ಹರಿಯಲು ಪ್ರಮುಖ ಮೋರಿಗಳ ನಿರ್ಮಾಣ ;
(6) ಕೆರೆಗಳ ಸಂರಕ್ಷಣೆ ಮತ್ತು ಪುನರುಜ್ಜೀವನ/ಅಭಿವೃದ್ಧಿ;
(7) ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999ರನ್ವಯ e-Procurement ಟೆಂಡರ್ ಕರೆಯುವುದು;

ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಹಾಗೂ ಸದಸ್ಯ ಕಾರ್ಯದರ್ಶಿಗಳು, ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ ಇವರ ಪ್ರಸ್ತಾವನೆಗಳನ್ನು ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂ.ನಅಇ 20 ಬಿಎಂಆರ್ 2013, ಬೆಂಗಳೂರು, ದಿನಾಂಕ: 13.02.2013

ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಮತ್ತು ಸದಸ್ಯ ಕಾರ್ಯದರ್ಶಿಗಳು, ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ ಇವರ ಪ್ರಸ್ತಾವನೆಯನ್ನು ಪರಿಶೀಲಿಸಿ, ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದ ದಿನಾಂಕ:04.10.2012ರಂದು ನಡೆದ ಪ್ರಾಧಿಕಾರದ 89ನೇ ಸಭೆಯ ವಿಷಯ ಸಂಖ್ಯೆ: 89(12)ರ ಸಭೆಯ ನಿರ್ಣಯದಂತೆ ಹಾಗೂ ಸರ್ಕಾರದ ಆದೇಶ ಸಂಖ್ಯೆ: ನಅಇ 200 ಬಿಎಂಆರ್ 2010, ದಿನಾಂಕ: 19.09.2011ನ್ನು ಭಾಗಶ: ಮಾರ್ಪಡಿಸಿ, ಪ್ರಾಧಿಕಾರದಲ್ಲಿ ಲಭ್ಯವಿರುವ ಮೊತ್ತದಲ್ಲಿ ಸೋಲಾರ್ ಸ್ಟ್ರೀಟ್ ಲೈಟ್‌ಗಳನ್ನು ಅಳವಡಿಸಲು ಆದೇಶಿಸಿದೆ. ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರವು ಈ ಸೋಲಾರ್ ಸ್ಟ್ರೀಟ್ ಲೈಟ್‌ಗಳನ್ನು ಅಳವಡಿಸುವ ಮೊದಲು ಕಿಯೋನಿಕ್ಸ್ ಸಂಸ್ಥೆಯಿಂದ ಒಂದು ವರ್ಷದ ಅವಧಿಗೆ ಸೋಲಾರ್ ದೀಪಗಳನ್ನು ಮೇಲುಸ್ತುವಾರಿ ನೋಡಿಕೊಳ್ಳುವ ಒಪ್ಪಂದದ ಪತ್ರವನ್ನು ಪಡೆಯತಕ್ಕದ್ದು. ಹಾಗೂ ಒಂದು ವರ್ಷದ ನಂತರ ಸೋಲಾರ್ ಸ್ಟ್ರೀಟ್ ಲೈಟ್‌ಗಳನ್ನು ಮುಂದಿನ ಭವಿಷ್ಯತ್‌ನಲ್ಲಿ ಮೇಲುಸ್ತುವಾರಿ ನೋಡಿಕೊಳ್ಳುವ ಬಗ್ಗೆ ಸಂಬಂಧಿಸಿದ ಗ್ರಾಮ ಪಂಚಾಯಿತಿಗಳಿಂದ ಈ ಸೋಲಾರ್ ಸ್ಟ್ರೀಟ್ ಲೈಟ್‌ಗಳನ್ನು ಅಳವಡಿಸುವ ಮೊದಲು ಒಂದು ವರ್ಷದ ನಂತರ ಮೇಲುಸ್ತುವಾರಿ ನೋಡಿಕೊಳ್ಳುವ ಬಗ್ಗೆ ಮುಚ್ಚಳಿಕೆ ಪ್ರಮಾಣ ಪತ್ರವನ್ನು ಆಯಾಯ ಗ್ರಾಮ ಪಂಚಾಯಿತಿಗಳಿಂದ ಪಡೆಯತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಸ್. ಚಂದ್ರಪ್ಪ) 13/2
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ.

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು - ಸದರಿ ಆದೇಶವನ್ನು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ಕೂಡಲೇ ಒದಗಿಸತಕ್ಕದ್ದು.

ಪ್ರತಿ:

1) ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.

2) ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿ, ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಯೋಜನಾ ಪ್ರಾಧಿಕಾರ, ಬೆಂಗಳೂರು.
3) ಜಿಲ್ಲಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ/ನಗರ ಜಿಲ್ಲೆ.
4) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ.
5) ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ.
6) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.